ಮಂಗಳವಾರ 19.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 28

Digital Varthe Kannada Daily Volume 01 - Issue 28 Tuesday 19.08.2025 Price: 5/- Rs 2 Pages Bangalore

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ದೇಶಕ್ಕೆ ಸ್ವಾತಂತ್ರ್ಯ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ರಾಯಣ್ಣ : ಉಜ್ಜಿನಪ್ಪ

## ಯುವಕರು ರಾಯಣ್ಣನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು – ಶಾಸಕ ಎನ್. ಶ್ರೀನಿವಾಸ್




ನೆಲಮಂಗಲ: ನಗರದ ಪರ್ವತಪ್ಪ ಬಡಾವಣೆಯಲ್ಲಿರುವ ಕನಕ ಸೌಧದಲ್ಲಿ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್‌ನ ಆಶ್ರಯದಲ್ಲಿ ಸಂಗೊಳ್ಳಿ ರಾಯಣ್ಣ ಅವರ ೨೨೭ನೇ ಜಯಂತ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕ ಎನ್. ಶ್ರೀನಿವಾಸ್ ಅವರು, "ಕಿತ್ತೂರು ಸಂಸ್ಥಾನದ ರಾಣಿ ಚೆನ್ನಮ್ಮ ಅವರ ಬಲಗೈ ಬಂಟನಾಗಿದ್ದ ಸಂಗೊಳ್ಳಿ ರಾಯಣ್ಣ ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ವಿರುದ್ಧ ಕೆಚ್ಚೆದೆಯ ಹೋರಾಟ ನಡೆಸಿದರು. ಇಂತಹ ಹೋರಾಟಗಾರರನ್ನು ಕೇವಲ ಸ್ಮರಿಸುವುದಲ್ಲದೆ, ಅವರ ತತ್ವ-ಆದರ್ಶಗಳನ್ನು ಇಂದಿನ ಯುವಕರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶಭಕ್ತಿ, ಧೈರ್ಯ, ತ್ಯಾಗ ಮತ್ತು ಶಿಸ್ತಿನ ಜೀವನದ ಮೌಲ್ಯಗಳನ್ನು ಅನುಸರಿಸಿದಾಗ ಮಾತ್ರ ಸಮಾಜ ನಿಜವಾದ ಅರ್ಥದಲ್ಲಿ ಬೆಳೆಯುತ್ತದೆ" ಎಂದು ಕರೆ ನೀಡಿದರು.

ಅವರು ಮುಂದುವರಿದು, "ಟ್ರಸ್ಟ್ ವತಿಯಿಂದ ಜಯಂತ್ಯೋತ್ಸವ ಆಯೋಜಿಸಿರುವುದು ಸಂತಸ ತಂದಿದೆ. ಸರಕಾರದಿಂದ ಸಿಗುವ ಸೌಲಭ್ಯಗಳ ಜೊತೆಗೆ ನಾನು ವೈಯಕ್ತಿಕವಾಗಿಯೂ ಸಹಕಾರ ನೀಡಲು ಸಿದ್ಧನಿದ್ದೇನೆ. ಸಮಾಜದಲ್ಲಿ ಸಂಘಟನೆ ಕಟ್ಟುವುದು ಮಾತ್ರ ಮುಖ್ಯವಲ್ಲ, ಆ ಸಂಘಟನೆಗಳು ಎಲ್ಲರಿಗೂ ಆಸರೆಯಾಗುವ ರೀತಿಯಲ್ಲಿ ಕೆಲಸ ಮಾಡಬೇಕು. ವಿಶೇಷವಾಗಿ ಬಡವರು, ಹಿಂದುಳಿದವರು ಹಾಗೂ ನಿರ್ಗತಿಕರ ಸೇವೆಗೆ ಸಂಘಟನೆಗಳು ಬದ್ಧರಾಗಬೇಕು" ಎಂದು ಅಭಿಪ್ರಾಯಪಟ್ಟರು.

ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್‌ನ ಅಧ್ಯಕ್ಷ ವಿ.ಪಿ. ಉಜ್ಜಿನಪ್ಪ ಅವರು, "ಸ್ವಾತಂತ್ರ್ಯ ಹೋರಾಟದ ಕಾಲದಲ್ಲಿ ಬ್ರಿಟಿಷರ ವಿರುದ್ಧ ಶೂರತನದಿಂದ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತರಲು ಮಹಾನ್ ಪಾತ್ರ ವಹಿಸಿದವರಲ್ಲಿ ಸಂಗೊಳ್ಳಿ ರಾಯಣ್ಣ ಪ್ರಮುಖರು. ಅವರ ದೇಶಾಭಿಮಾನ, ಧೈರ್ಯ ಮತ್ತು ಬಲಿದಾನ ಇಂದಿಗೂ ಪ್ರತಿಯೊಬ್ಬರಿಗೂ ಸ್ಫೂರ್ತಿಯಾಗಿದೆ. ಇದೇ ಪ್ರಥಮ ಬಾರಿಗೆ ನಮ್ಮ ಟ್ರಸ್ಟ್‌ನಿಂದ ಜಯಂತ್ಯೋತ್ಸವ ಆಯೋಜನೆ ನಡೆದಿದೆ. ಮುಂದಿನ ದಿನಗಳಲ್ಲಿ ಸಮಾಜ ಸೇವೆಗೆ ಮತ್ತಷ್ಟು ಬದ್ಧರಾಗುತ್ತೇವೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾದನಾ ಯಕನಹಳ್ಳಿ ಬಳಿ ಅಭಯವಸಿಷ್ಠ ಆಸ್ಪತ್ರೆಯ ಸಹಯೋಗದಲ್ಲಿ ಉಚಿತ ಆರೋಗ್ಯ ಶಿಬಿರ ಹಾಗೂ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ನೂರಾರು ಮಂದಿ ಆರೋಗ್ಯ ತಪಾಸಣೆ ಹಾಗೂ ರಕ್ತದಾನದಲ್ಲಿ ಪಾಲ್ಗೊಂಡು ಶಿಬಿರದ ಪ್ರಯೋಜನ ಪಡೆದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಕುರುಬರ ಸಂಘದ ಅಧ್ಯಕ್ಷ ಹೊನ್ನಸಿದ್ದಯ್ಯ, ಬೆಂಗಳೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಬಿ.ಡಿ. ಗಂಗರಾಜು, ಪದವಿಪೂರ್ವ ಶಿಕ್ಷಣ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕ ಸಿ. ಅಶ್ವತ್ಥನಾರಾಯಣ, ನಗರಸಭೆ ಅಧ್ಯಕ್ಷ ಎನ್. ಗಣೇಶ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಂ. ನಾರಾಯಣ ಗೌಡ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಟನೆಯ ಜಿಲ್ಲಾಧ್ಯಕ್ಷ ಡಿ. ಸಿದ್ದರಾಜು, ನಿಟಕಪೂರ್ವ ಅಧ್ಯಕ್ಷೆ ಪೂರ್ಣಿಮಾ ಸುಗ್ಗರಾಜು, ಮಾಜಿ ಅಧ್ಯಕ್ಷೆ ಲತಾ ಹೇಮಂತ್ ಕುಮಾರ್, ಶೆಫರ್ಡ್ ಇಂಡಿಯಾ ಅಂತರರಾಷ್ಟ್ರೀಯ ರಾಜ್ಯ ಯುವ ಘಟಕ ಅಧ್ಯಕ್ಷ ಚೇತನ್, ಮುಖಂಡರಾದ ಕೆ. ನಾಗರಾಜು, ಲೋಕೇಶ್, ಮುನಿರಾಜು ಸೇರಿದಂತೆ ಅನೇಕರು ಹಾಜರಿದ್ದರು.

# ಶಕ್ತಿ ಯೋಜನೆಗೆ ವಿಶ್ವದಾಖಲೆ ಮಾನ್ಯತೆ

## ಉಚಿತ ಬಸ್ ಪ್ರಯಾಣ Golden Book of World Recordsನಲ್ಲಿ ದಾಖಲೆ

ಬೆಂಗಳೂರು: ಮಹಿಳಾ ಸಬಲೀಕರಣದ ದಿಟ್ಟ ಹೆಜ್ಜೆಯಾಗಿ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದ ಶಕ್ತಿ ಯೋಜನೆ ಇದೀಗ ವಿಶ್ವದಾಖಲೆ ಪುಟ ಸೇರಿದೆ. 500 ಕೋಟಿಗೂ ಹೆಚ್ಚು ಮಹಿಳೆಯರು ಉಚಿತವಾಗಿ ಪ್ರಯಾಣಿಸಿರುವ ಸಾಧನೆ Golden Book of World Recordsನಲ್ಲಿ ಸ್ಥಾನ ಪಡೆದಿದೆ.

ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಸಂತಸ ಹಂಚಿಕೊಂಡು, "ನಾನು ಸಚಿವನಾದ ಕೂಡಲೇ ಆರಂಭವಾದ ಈ ಯೋಜನೆ ಆರಂಭದಲ್ಲಿ ಸವಾಲಿನದ್ದಾಗಿತ್ತು. ಆದರೆ ತಂಡದ ಶ್ರಮದಿಂದ ಯಶಸ್ಸು ಕಂಡಿದೆ. ಇಂದು ವಿಶ್ವದಾಖಲೆ ಪುಟ ಸೇರಿರುವುದು ಸರ್ಕಾರಕ್ಕೂ ಜನತೆಗೂ ಹೆಮ್ಮೆಯ ಕ್ಷಣ" ಎಂದರು.

ಜೂನ್ 11, 2023 ರಿಂದ ಜುಲೈ 25, 2025ರವರೆಗೆ 5,00,00,00,000+ (ಐದು ಬಿಲಿಯನ್) ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯಡಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದಾರೆ. ಇದು ವಿಶ್ವದಾದ್ಯಂತ ಅತಿ ಹೆಚ್ಚು ಮಹಿಳಾ ಪ್ರಯಾಣಿಕರ ದಾಖಲೆ.

### ಆರ್ಥಿಕ-ಸಾಮಾಜಿಕ ಪ್ರಭಾವ

- **ಬೆಂಗಳೂರು: 23% ಮಹಿಳಾ ಉದ್ಯೋಗ ಹೆಚ್ಚಳ**
- **ಹುಬ್ಬಳ್ಳಿ-ಧಾರವಾಡ: 21% ಮಹಿಳಾ ಉದ್ಯೋಗ ಹೆಚ್ಚಳ**
- **ರಾಜ್ಯದ ತಲಾ ಆದಾಯದಲ್ಲಿ ಏರಿಕೆ**
- **ಮಹಿಳೆಯರ ಚಲನವಲನ, ಆರ್ಥಿಕ ಅವಕಾಶಗಳಲ್ಲಿ ವಿಸ್ತರಣೆ**



"ವಿಶ್ವದಾಖಲೆಗೆ ಸೇರ್ಪಡೆ ನಮ್ಮ ಸರ್ಕಾರದ ಗರ್ವದ ಸಾಧನೆ. ದೇಶದ ಬೇರೆ ರಾಜ್ಯಗಳು ಕೂಡ ಶಕ್ತಿ ಮಾದರಿಯನ್ನು ಅನುಸರಿಸುತ್ತಿವೆ. ಇದು ಮಹಿಳಾ ಸಬಲೀಕರಣಕ್ಕೆ ಕನ್ನಡ ನಾಡಿನ ಕೊಡುಗೆ"

**– ರಾಮಲಿಂಗಾ ರೆಡ್ಡಿ, ಸಾರಿಗೆ ಸಚಿವ**

### ಸಾರಿಗೆ ಕ್ಷೇತ್ರದ ಬದಲಾವಣೆಗಳು

- **5,800 ಹೊಸ ಬಸ್ಸುಗಳು ಸೇರ್ಪಡೆ**
- **10,000 ಹೊಸ ನೇಮಕಾತಿಗಳು**
- **2,000 ಕೋಟಿ ಸರ್ಕಾರದ ನೆರವು ಸಾಲ ಪಾವತಿಗೆ**
- **ಪ್ರಯಾಣಿಕರ ಸಂಖ್ಯೆಯಲ್ಲಿ ದಾಖಲೆ ಮಟ್ಟದ ಹೆಚ್ಚಳ**

ಕನ್ನಡ ನಾಡಿನ ಹೆಮ್ಮೆಯ ಸಾಧನೆ ಇಂದಿಗೆ ವಿಶ್ವದಾಖಲೆಯಾಗಿ ಗುರುತಿಸಿಕೊಂಡಿದೆ. ಶಕ್ತಿ ಯೋಜನೆ ಕೇವಲ ಉಚಿತ ಬಸ್ ಪ್ರಯಾಣವಲ್ಲ, ಇದು ಮಹಿಳೆಯರ ಆತ್ಮವಿಶ್ವಾಸ ಮತ್ತು ಆರ್ಥಿಕ ಸ್ವಾವಲಂಬನೆಯ ದಾರಿ. ಗ್ರಾಮದಿಂದ ನಗರಕ್ಕೆ , ಕೆಲಸದಿಂದ ಶಿಕ್ಷಣದವರೆಗೂ ಮಹಿಳೆಯರ ಪ್ರತಿಯೊಂದು ಹೆಜ್ಜೆಗೂ ಈ ಯೋಜನೆ ಬೆಂಬಲವಾಗಿದೆ. ಲಕ್ಷಾಂತರ ತಾಯಂದಿರು, ವಿದ್ಯಾರ್ಥಿನಿಯರು ಮತ್ತು ಕಾರ್ಮಿಕ ಮಹಿಳೆಯರು ಇದರ ಪ್ರಯೋಜನ ಪಡೆದು ತಮ್ಮ ಬದುಕಿಗೆ ಹೊಸ ಅರ್ಥ ನೀಡುತ್ತಿದ್ದಾರೆ. ಈ ಸಾಧನೆ ಸರ್ಕಾರದ ದೃಢನಿಶ್ಚಯ ಮತ್ತು ಸಾರಿಗೆ ಇಲಾಖೆಯ ಶ್ರಮದ ಫಲ. ಭವಿಷ್ಯದಲ್ಲಿ ಇನ್ನಷ್ಟು ಸಬಲೀಕರಣ ಕಾರ್ಯಕ್ರಮಗಳನ್ನು ಬಲವಾಗಿ ಜಾರಿಗೆ ತರಲು ನಮ್ಮ ಬದ್ಧತೆ ಇದೆ.



**ಹೆಚ್ .ನಾಗರತ್ನ**
**ಅಧ್ಯಕ್ಷರು , ಗ್ಯಾರಂಟಿ ಸಮಿತಿ, ನೆಲಮಂಗಲ ವಿಧಾನಸಭಾ ಕ್ಷೇತ್ರ**

**ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

# ಸಿಇಸಿ ಬಿಜೆಪಿ ವಕ್ತಾರರಂತೆ ವರ್ತನೆ!? ವಿರೋಧ ಪಕ್ಷಗಳ ಆಕ್ರೋಶ!!



## ಮತದಾರರ ಪಟ್ಟಿ ಅಕ್ರಮ, SIR ಕುರಿತು ಉತ್ತರಿಸಲು ವಿಫಲ – ವಿರೋಧ ಪಕ್ಷಗಳ ಜಂಟಿ ಆರೋಪ

ನವದೆಹಲಿ: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಬಿಜೆಪಿ ವಕ್ತಾರರಂತೆ ವರ್ತಿಸುತ್ತಿದ್ದಾರೆ ಎಂದು ಸೋಮವಾರ ಆರೋಪಿಸಿರುವ ವಿರೋಧ ಪಕ್ಷಗಳು, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಮತ್ತು ಮತದಾರರ ಪಟ್ಟಿ ಅಕ್ರಮಗಳಿಗೆ ಸಂಬಂಧಿಸಿದ ವಿಷಯಗಳ ಕುರಿತು ತಮ್ಮ ಪ್ರಶ್ನೆಗಳಿಗೆ ಉತ್ತರಿಸಲು ಅವರು ವಿಫಲರಾಗಿದ್ದಾರೆ ಎಂದು ತಿಳಿಸಿವೆ.

ಸಭೆಯ ನಂತರ ಇಲ್ಲಿ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್, ಟಿಎಂಸಿ, ಎಸ್‌ಪಿ, ಡಿಎಂಕೆ ಮತ್ತು ಆರ್‌ಜೆಡಿ ಮುಂತಾದ ಎಂಟು ಪ್ರಮುಖ ವಿರೋಧ ಪಕ್ಷಗಳ ಪ್ರತಿನಿಧಿಗಳು ಸಿಇಸಿಯನ್ನು ತರಾಟೆಗೆ ತೆಗೆದುಕೊಂಡರು, ಅವರು ಎತ್ತಿರುವ ಪ್ರಶ್ನೆಗಳಿಗೆ ಉತ್ತರಿಸುವ ಬದಲು, ಅವರು ಭಾನುವಾರ ತಮ್ಮ ಪತ್ರಿಕಾಗೋಷ್ಠಿಯಲ್ಲಿ ಅವರ ಮೇಲೆ ದಾಳಿ ಮಾಡಲು ಆಯ್ಕೆಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

"ಮತದಾನದ ಹಕ್ಕು ಸಾಮಾನ್ಯ ನಾಗರಿಕನಿಗೆ ಸಂವಿಧಾನವು ನೀಡಿರುವ ಪ್ರಮುಖ ಹಕ್ಕು. ಪ್ರಜಾಪ್ರಭುತ್ವವು ಅದರ ಮೇಲೆ ಅವಲಂಬಿತವಾಗಿದೆ. ಚುನಾವಣಾ ಆಯೋಗವು ಅದನ್ನು ರಕ್ಷಿಸಲು ಉದ್ದೇಶಿಸಲಾದ ಸಂಸ್ಥೆಯಾಗಿದೆ... ಆದರೆ ರಾಜಕೀಯ ಪಕ್ಷಗಳು ಎತ್ತುತ್ತಿರುವ ಪ್ರಮುಖ ಪ್ರಶ್ನೆಗಳಿಗೆ ಸಿಇಸಿ ಉತ್ತರಿಸಲಿಲ್ಲ ಮತ್ತು ಅದರ ಜವಾಬ್ದಾರಿಯಿಂದ ಓಡಿಹೋಗುತ್ತಿದೆ ಎಂದು ನಾವು ನೋಡಬಹುದು" ಎಂದು ಕಾಂಗ್ರೆಸ್ ನಾಯಕ ಗೌರವ್ ಗೊಗೊಯ್ ಹೇಳಿದರು. ಆಯೋಗದ ಆಯುಕ್ತರು ವಿರೋಧ ಪಕ್ಷಗಳು ಕೇಳಿದ ಮಾನ್ಯ ಪ್ರಶ್ನೆಗಳಿಗೆ ಉತ್ತರಿಸಬೇಕಾಗಿತ್ತು. "ಇದಕ್ಕೆ ವಿರುದ್ಧವಾಗಿ, ಅವರು ರಾಜಕೀಯ ಪಕ್ಷಗಳ ಮೇಲೆ ಪ್ರಶ್ನೆಗಳನ್ನು ಎತ್ತಿದರು ಮತ್ತು ಅವುಗಳ ಮೇಲೆ ದಾಳಿ ಮಾಡಿದರು" ಎಂದು ಅವರು ಆರೋಪಿಸಿದರು.

"ಚುನಾವಣೆಗಳು ಕೇವಲ ಮೂರು ತಿಂಗಳು ಇರುವಾಗ, ರಾಜಕೀಯ ಪಕ್ಷಗಳೊಂದಿಗೆ ಚರ್ಚಿಸದೆ, SIR ನ್ನು ಏಕೆ ಇಷ್ಟು ತರಾತುರಿಯಲ್ಲಿ ಮಾಡಲಾಗಿದೆ ಎಂದು ಅವರು ಹೇಳಿದ್ದರೆ ಉತ್ತಮವಾಗಿತ್ತು; ಅವರು SIR ಅನ್ನು ಘೋಷಿಸಲು ಏಕೆ ಆತುರಪಡುತ್ತಿದ್ದಾರೆ?" ಎಂದು ಗೊಗೋಯ್ ಪ್ರಶ್ನಿಸಿದ್ದಾರೆ.

- **ಎಂಟು ವಿರೋಧ ಪಕ್ಷಗಳ ಜಂಟಿ ಪತ್ರಿಕಾಗೋಷ್ಠಿ.**
- **"ಸಿಇಸಿ ಉತ್ತರಿಸದೇ BJP ಶೈಲಿ ದಾಳಿ" – ಗೊಗೊಯ್.**
- **"18,000 ಹೆಸರು ತೆಗೆದು ಕ್ರಮವಿಲ್ಲ" – ರಾಮಗೋಪಾಲ್.**
- **"ಪಟ್ಟಿ ನಕಲಿ ಅಂದರೆ ಲೋಕಸಭೆ ವಿಸರ್ಜನೆ" – ಮಹುವಾ.**
- **"ಸಿಇಸಿ ಬದಲು BJP ವಕ್ತಾರ" – ಮನೋಜ್ ಝಾ.**
- **"ಸಿಇಸಿ BJP ಶೈಲಿ" – ಸಾವಂತ್.**
- **"ಆರೋಪ ಆಧಾರರಹಿತ, ಪರಿಷ್ಕರಣೆ ಪಾರದರ್ಶಕ" – ಸಿಇಸಿ.**

ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ಖಚಿತಪಡಿಸುವುದು ಚುನಾವಣಾ ಆಯೋಗದ ಸಾಂವಿಧಾನಿಕ ಕರ್ತವ್ಯ ಎಂದು ಅವರು ಚುನಾವಣಾ ಆಯೋಗಕ್ಕೆ ನೆನಪಿಸಿದರು ಮತ್ತು ಚುಕ್ಕಾಣಿ ಹಿಡಿದಿರುವ ಅಧಿಕಾರಿಗಳು ವಿರೋಧ ಪಕ್ಷದ ಆರೋಪಗಳ ಬಗ್ಗೆ ತನಿಖೆಗೆ ಅವಕಾಶ ನೀಡುತ್ತಿಲ್ಲ ಎಂದು ಗೊಗೋಯ್ ಆರೋಪಿಸಿದ್ದಾರೆ.

ಪುಟ 2ಕ್ಕೆ.....

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಮತದಾರರ ಪಟ್ಟಿ ಅಕ್ರಮ, SIR ಕುರಿತು ಉತ್ತರಿಸಲು ವಿಫಲ – ವಿರೋಧ ಪಕ್ಷಗಳ ಜಂಟಿ ಆರೋಪ

ಪುಟ 2ಕ್ಕೆ "EC ಪಕ್ಷಪಾತ ವಹಿಸುವ ಕೆಲವು ಅಧಿಕಾರಿಗಳ ಕೈಯಲ್ಲಿದೆ ಎಂಬುದು ಸ್ಪಷ್ಟವಾಗಿದೆ. ಅಂತಹ ಅಧಿಕಾರಿಗಳು ಯಾವುದೇ ತನಿಖೆಯನ್ನು ವಿರೋಧಿಸುತ್ತಾರೆ" ಎಂದು ಅವರು ಆರೋಪಿಸಿದರು.

ಸಮಾಜವಾದಿ ಪಕ್ಷದ ನಾಯಕ ರಾಮಗೋಪಾಲ್ ಯಾದವ್, ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು ತಮ್ಮ ದೂರಿನೊಂದಿಗೆ ಅಫಿಡವಿಟ್ ನೀಡುವಂತೆ ಚುನಾವಣಾ ಆಯೋಗ ಕೇಳುತ್ತಿದ್ದರೆ, ಅವರ ಪಕ್ಷದ SP 2022 ರಲ್ಲಿ ಸುಮಾರು 18,000 ಮತದಾರರನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂಬ ದೂರುಗಳೊಂದಿಗೆ ಅಫಿಡವಿಟ್ ಸಲ್ಲಿಸಿದೆ, ಆದರೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ" ಎಂದು ಅವರು ಹೇಳಿದರು.

"2022 ರ ಯುಪಿ ಚುನಾವಣೆಯಲ್ಲಿ, ಅಖಿಲೇಶ್ ಯಾದವ್ ಎಸ್ಪಿ ಬೆಂಬಲಿಗರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಹೇಳಿದಾಗ, ನಾವು ಅಫಿಡವಿಟ್ ನೀಡಿದ್ದೇವೆ, ಆದರೆ ಯಾವುದೇ ಕ್ರಮ ಕೈಗೊಂಡಿಲ್ಲ" ಎಂದು ಅವರು ಹೇಳಿದರು. ಕಳೆದ ಸಾರ್ವತ್ರಿಕ ಚುನಾವಣೆ ನಡೆದ ಮತದಾರರ ಪಟ್ಟಿ ಸರಿಯಾಗಿಲ್ಲದಿದ್ದರೆ, ಲೋಕಸಭೆಯನ್ನು ವಿಸರ್ಜಿಸಬೇಕು ಎಂದು ತೃಣಮೂಲ ಕಾಂಗ್ರೆಸ್ (ಟಿಎಂಸಿ) ನಾಯಕಿ ಮಹುವಾ ಮೊಯಿತ್ರಾ ಹೇಳಿದರು.

"ಲೋಕಸಭಾ ಚುನಾವಣೆ ನಡೆದ ಪಟ್ಟಿಯು ನಕಲಿಯೇ? ಅದು ನಿಜವಾಗಿದ್ದರೆ, ಪ್ರಸ್ತುತ ಮತ್ತು ಹಿಂದಿನ ಚುನಾವಣಾ ಆಯುಕ್ತರ ಮೇಲೆ ಮೊಕದ್ದಮೆ ಹೂಡಬೇಕು ಮತ್ತು ಈ ಲೋಕಸಭೆಯನ್ನು ತಕ್ಷಣವೇ ವಿಸರ್ಜಿಸಬೇಕು" ಎಂದು ಮೊಯಿತ್ರಾ ಹೇಳಿದರು.

ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ನಾಯಕ ಮನೋಜ್ ಝಾ ಸಿಇಸಿ ವಿರುದ್ಧ ವಾಗ್ದಾಳಿ ನಡೆಸಿ, "ನಿನ್ನೆ ನಾವು ನಮ್ಮ ಸಿಇಸಿಯನ್ನು ಹುಡುಕುತ್ತಿದ್ದೆವು, ನಮಗೆ ಹೊಸ ಬಿಜೆಪಿ ವಕ್ತಾರರು ಸಿಕ್ಕರು" ಎಂದು ಹೇಳಿದರು.

ಶಿವಸೇನೆಯ (ಯುಬಿಟಿ) ಅರವಿಂದ್ ಸಾವಂತ್ ಕೂಡ ಸಿಇಸಿ "ಬಿಜೆಪಿ ವಕ್ತಾರರಂತೆ ವರ್ತಿಸುತ್ತಿದ್ದಾರೆ" ಎಂದು ಆರೋಪಿಸಿದರು.

ಭಾನುವಾರ ದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಿಇಸಿ ಜ್ಞಾನೇಶ್ ಕುಮಾರ್, ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆಯು ಮತದಾರರ ಪಟ್ಟಿಯಲ್ಲಿರುವ ಎಲ್ಲಾ ನ್ಯೂನತೆಗಳನ್ನು ತೆಗೆದುಹಾಕುವ ಗುರಿಯನ್ನು ಹೊಂದಿದೆ ಮತ್ತು ಕೆಲವು ಪಕ್ಷಗಳು ಅದರ ಬಗ್ಗೆ ತಪ್ಪು ಮಾಹಿತಿಯನ್ನು ಹರಡುತ್ತಿವೆ, ಚುನಾವಣಾ ಆಯೋಗದ ಭುಜದಿಂದ ವಜಾಗೊಳಿಸುತ್ತಿರುವುದು ತೀವ್ರ ಕಳವಳಕಾರಿ ವಿಷಯವಾಗಿದೆ ಎಂದು ಹೇಳಿದರು.ಡಬಲ್ ವೋಟಿಂಗ್ ಮತ್ತು "ಮತ ಕಳ್ಳತನ"ದ ಆರೋಪಗಳನ್ನು "ಆಧಾರರಹಿತ" ಎಂದು ಸಿಇಸಿ ತಿರಸ್ಕರಿಸಿತು ಮತ್ತು ಎಲ್ಲಾ ಪಾಲುದಾರರು ಎಸ್‌ಐಆರ್ ಅನ್ನು ಪಾರದರ್ಶಕ ರೀತಿಯಲ್ಲಿ ಯಶಸ್ವಿಗೊಳಿಸಲು ಕೆಲಸ ಮಾಡುತ್ತಿದ್ದಾರೆ ಎಂದು ಪ್ರತಿಪಾದಿಸಿದರು.

# ಧರ್ಮಸ್ಥಳ ಪ್ರಕರಣದಲ್ಲಿ ಸುಳ್ಳು ಆರೋಪ ಮಾಡಿದರೆ ಕಠಿಣ ಕ್ರಮ: ಡಿಕೆ ಶಿವಕುಮಾರ್



ಬೆಂಗಳೂರು: ಧರ್ಮಸ್ಥಳದ ಬಗ್ಗೆ ಸುಳ್ಳು ಆರೋಪ ಮಾಡಿದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ವಿಧಾನಸಭೆ ಕಲಾಪದಲ್ಲಿ ಮಾತನಾಡಿದ ಅವರು, ಜವಾಬ್ದಾರಿಯುತ ಹಿರಿಯ ಅಧಿಕಾರಿಗಳಿಗೆ ತನಿಖೆಯ ಜವಾಬ್ದಾರಿ ನೀಡಲಾಗಿದ್ದು, ಸತ್ಯಾಂಶಗಳು ಬಹಿರಂಗವಾಗುವವರೆಗೆ ತಾಳ್ಮೆ ವಹಿಸಬೇಕು ಎಂದು ಪ್ರತಿಪಕ್ಷಗಳಿಗೆ ಮನವಿ ಮಾಡಿದರು. "ಮುಖ್ಯಮಂತ್ರಿಗಳು ಧರ್ಮಸ್ಥಳದ ಪ್ರಕೃತಿ ಚಿಕಿತ್ಸಾಲಯದಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಅವರಿಗೆ ಆ ಕ್ಷೇತ್ರದ ಮೇಲೆ ನಂಬಿಕೆ ಇದೆ. ಧರ್ಮದಲ್ಲಿ ರಾಜಕೀಯ ಮಾಡಬಾರದು, ರಾಜಕಾರಣದಲ್ಲಿ ಧರ್ಮ ಇರಬೇಕು."

ಸಿಎಲ್‌ಪಿ ಸಭೆಯಲ್ಲಿ ಶಾಸಕರಾದ ಶಿವಲಿಂಗೇಗೌಡ ಮತ್ತು ಬೇಳೂರು ಗೋಪಾಲಕೃಷ್ಣ ಪ್ರಸ್ತಾಪ ಮಾಡಿದಾಗಲೇ ಮುಖ್ಯಮಂತ್ರಿ ಕಠಿಣ ಕ್ರಮಕ್ಕೆ ಭರವಸೆ ನೀಡಿದ್ದಾರೆ ಎಂದು ಅವರು ತಿಳಿಸಿದರು. ಪ್ರತಿಪಕ್ಷಗಳನ್ನು ಟೀಕಿಸಿ ಡಿಕೆಶಿ ಮಾತನಾಡಿ "ಮೊದಲು ನೀವು ಎಸ್‌ಐಟಿ ಬೇಡ ಎಂದು ಹೇಳಬೇಕಾಗಿತ್ತು. ಹದಿನೈದು ದಿನ ಕಳೆದ ಬಳಿಕ ಹೇಳುತ್ತೀರಿ. ಇದರಲ್ಲಿ ಷಡ್ಯಂತ್ರದ ಸುಳಿವು ಇದೆ. ಗೃಹಸಚಿವರು ಕಾನೂನಿನ ಅಡಿ ಕೆಲಸ ಮಾಡುತ್ತಿದ್ದಾರೆ."

# ವಿಧಾನ ಪರಿಷತ್ತಿನಲ್ಲಿ ಪ್ರತಿಧ್ವನಿಸಿದ ಹಾಸನ ಸರಣಿ ಹೃದಯಾಘಾತ ಘಟನೆಗಳು



ಬೆಂಗಳೂರು: ವಿಧಾನ ಪರಿಷತ್ತಿನಲ್ಲಿ ಸೋಮವಾರ ಹಾಸನದಲ್ಲಿ ನಡೆದ ಸರಣಿ ಹೃದಯಾಘಾತದ ಘಟನೆಗಳ ಕುರಿತು ಚರ್ಚೆ ನಡೆಯಿತು. ಪರಿಷತ್ ಸದಸ್ಯರು, ವೈದ್ಯಕೀಯ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಎರಡರಿಂದಲೂ ಹೃದಯಾಘಾತದ ಘಟನೆಗಳು, ಕಾರಣ, ಕ್ರಮಗಳು, ಸೌಲಭ್ಯಗಳು, ಆರೈಕೆ ಕೇಂದ್ರಗಳು, ಹುದ್ದೆಗಳು ಮತ್ತು ಇತರವುಗಳ ಬಗ್ಗೆ ಹಲವು ಪ್ರಶ್ನೆಗಳನ್ನು ಕೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು, ಯುವಕರಲ್ಲಿಯೂ ಹೃದಯಾಘಾತದ ಘಟನೆಗಳು ಕಳವಳಕಾರಿಯಾಗಿದೆ. ಈ ಸಂಬಂಧ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು. ಎರಡು ತಿಂಗಳಲ್ಲಿ ನಡೆದ ಹೃದಯಾಘಾತದ ಘಟನೆಗಳ ಮಾದರಿಯನ್ನು ಗಮನಿಸಲಾಗಿದೆ ಮತ್ತು ಶೇ. 6 ರಷ್ಟು ಹಿಂದಿನ ವರ್ಷಗಳಂತೆ ಕಂಡುಬಂದಿದೆ. ಕೋವಿಡ್ -19 ಗೆ ಸಂಬಂಧಿಸಿದ ಹೃದಯಾಘಾತದ ಮಾದರಿ ಸರಿಯಾಗಿಲ್ಲ ಎಂದು ಅವರು ಹೇಳಿದರು.

# zee5ನಲ್ಲಿ ಶೋಧ ವೆಬ್ ಸಿರೀಸ್ ಸ್ಟ್ರೀಮಿಂಗ್



## "ನಮ್ಮ ಭಾಷೆ – ನಮ್ಮ ಮಣ್ಣಿನ ಕಥೆಗಳನ್ನು ಜಗತ್ತಿಗೆ ತಲುಪಿಸುತ್ತೇವೆ" – ಜೀ5

ಜೀ5 ವೆಬ್ ಸರಣಿಗಳಿಗೆ ವೇದಿಕೆ ಸೃಷ್ಟಿಸಿದೆ. ಈ ಮೊದಲು 'ಅಯ್ಯನ ಮನೆ' ಹೆಸರಿನ ಮಿನಿ ವೆಬ್ ಸರಣಿಯನ್ನು ಪ್ರಸಾರ ಮಾಡಿ ಯಶಸ್ಸು ಕಂಡಿದೆ. ಈಗ 'ಶೋಧ' ಹೆಸರಿನ ವೆಬ್ ಸೀರಿಸ್ ರಿಲೀಸ್ ಮಾಡಲು ರೆಡಿ ಆಗಿದೆ. ಈ ಸರಣಿಯ ಟ್ರೇಲರ್ ಗೆ ಭರಪೂರ ಮೆಚ್ಚುಗೆ ವ್ಯಕ್ತವಾಗಿದೆ. ಇದೇ ತಿಂಗಳ 29ರಿಂದ ಶೋಧ zee5ನಲ್ಲಿ ಸ್ಟ್ರೀಮಿಂಗ್ ಆರಂಭಿಸಲಿದೆ. ಈ ಕುರಿತು ಇಂದು ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಸುದ್ದಿ ಗೋಷ್ಟಿ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಜೀ5 ಬ್ಯುಸಿನೆಸ್ ಹೆಡ್ ದೀಪಕ್ ಶ್ರೀರಾಮಲು ಮಾತನಾಡಿ, zee5 ಈ ಮೊದಲು ಒಂದೇ ಒಟಿಟಿ ಫ್ಲಾಟ್ ಫಾರ್ಮ್ ಆಗಿತ್ತು. ಈಗ ಭಾಷೆಗಾಗಿ ಒಂದು ವಿಶೇಷ ಒಟಿಟಿ ಶುರು ಮಾಡಿದ್ದೇವೆ. Zee5 ಈಗ ಕನ್ನಡ zee5 ಆಗಿದೆ. ಈಗ ಇದರ ಜೊತೆಗೆ ವೆಬ್ ಸಿರೀಸ್ ಶುರು ಮಾಡಿದ್ದೇವೆ. ಇದು zee5 ಮೊದಲ ಪ್ರಯತ್ನ. ಮಿನಿ ಸಿರೀಸ್ ಹಾಗೂ ಮೈಕ್ರೋ ಸಿರೀಸ್ ಎಂಬುದನ್ನು ಶುರು ಮಾಡಿದ್ದೇವೆ. ಮಿನಿ ಮತ್ತು ಮೆಗಾ ಸಿರೀಸ್ ಇದೆ. ಮಿನಿ ಸಿರೀಸ್ ಮೊದಲ ಹೆಜ್ಜೆಯೇ ಅಯ್ಯನ ಮನೆ. ಅದಕ್ಕೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಈ ಸಕ್ಸಸ್ ಮುಂದಿನ ಹೆಜ್ಜೆಯೇ ಶೋಧ. ಶೋಧ ಶುರು ಮಾಡಿದಾಗ ಕೆಆರ್ ಜಿಯವರು ಸಾಥ್ ಕೊಟ್ಟರು. ಇದರ ಮುಂದುವರೆದ ಭಾಗವಾಗಿ ಪಿಆರ್ ಕೆ ಪ್ರೊಡಕ್ಷನ್ ಹಾಗೂ ತರುಣ್ ಸುಧೀರ್ ಪ್ರೊಡಕ್ಷನ್ ಸೇರಿದಂತೆ ಹಲವು ಪ್ರೊಡಕ್ಷನ್ ಜೊತೆ ಕೈ ಜೋಡಿಸಿದ್ದೇವೆ. ಈ ಸಿರೀಸ್ ಪ್ರಪಂಚವೇ ವಿಭಿನ್ನ ಎಂದರು.

ಕೆಆರ್ ಜಿ ಸ್ಟುಡಿಯೋದ ಕಾರ್ತಿಕ್ ಗೌಡ ಮಾತನಾಡಿ, ಅಯ್ಯನ ಮನೆ ಸಕ್ಸಸ್ ಬಳಿ ಪ್ರದೀಪ್ ಬಂದು ವೆಬ್ ಸಿರೀಸ್ ಐಡಿ ಇದೆ ಮಾಡೋಣಾ ಎಂದು ಕೇಳಿದರು. ಅದಕ್ಕೆ ಫ್ರೆಶ್ ರೈಟಿಂಗ್ ಬರಬೇಕು. ಸುಹಾಸ್ ಹಿಂದಿಯಲ್ಲಿ ಫರ್ಜಿ ವೆಬ್ ಸಿರೀಸ್, ಫ್ಯಾಮಿಲಿ ಮ್ಯಾನ್ 2, 3 ವೆಬ್ ಸರಣಿಗೆ ರೈಟರ್ ಆಗಿ ಕೆಲಸ ಮಾಡಿದ್ದರು. ಅವರನ್ನು ತಂದವು. ಬಳಿಕ ಸುನಿಲ್ ಮೈಸೂರು ಬಂದರು. ಹೀಗೆ ಒಬ್ಬೊಬ್ಬರೇ ತಂಡ ಸೇರಿಕೊಂಡರು. ತುಂಬಾ ಜನ ಸೇರಿಕೊಂಡು ವೆಬ್ ಸಿರೀಸ್ ಮಾಡಿದ್ದೇವೆ. ಟ್ರೇಲರ್ ಗೆ ಒಳ್ಳೆ ಪ್ರತಿಕ್ರಿಯೆ ಸಿಕ್ಕಿದೆ. ಇದೇ ತಿಂಗಳ 29ರಂದು ಜೀ5ನಲ್ಲಿ ಸ್ಟ್ರೀಮಿಂಗ್ ಆಗಲಿದೆ ಎಂದರು.

ನಟ ಪವನ್ ಕುಮಾರ್ ಮಾತನಾಡಿ, ನಾವು ಹಿಂದಿಯಲ್ಲಿ ಸಿರೀಸ್ ಮಾಡಿದ್ದೆ. ಕನ್ನಡದಲ್ಲಿಯೂ ಮಾಡಬೇಕು ಎಂದಾಗ ರಿಜೆಕ್ಟ್ ಆಗುತ್ತಿತ್ತು. zee5ನಲ್ಲಿ ವೆಬ್ ಸಿರೀಸ್ ಮಾಡುತ್ತಿದ್ದಾರೆ ಎಂದಾಗ ಖುಷಿಯಾಯ್ತು. ಶೋಧದಲ್ಲಿ ಆಕ್ಟ್ ಮಾಡ್ತೀಯಾ ಎಂದು ಕೇಳಿದರು. ಕಥೆ ಕೇಳಿದಾಗ ನಾನು ಆಟವಾಡಲು ಅವಕಾಶವಿದೆ ಎಂದು ತಿಳಿಯಿತು. ವೆಬ್ ಸಿರೀಸ್ ನಲ್ಲಿ ಒಳ್ಳೊಳ್ಳೆ ಕಥೆಗಳನ್ನು ಹೇಳಬಹುದು. ತುಂಬಾ ಜನ ಡೈರೆಕ್ಟರ್ ಹಾಗೂ ರೈಟರ್ಸ್ ಗೆ ದೊಡ್ಡ zee5 ಫ್ಲಾಟ್ ಫಾರ್ಮ್ ಆಗಲಿ ಎಂದು ಶುಭ ಹಾರೈಸಿದರು.

ಕನ್ನಡ ಚಿತ್ರರಂಗಕ್ಕೆ ಸದಭಿರುಚಿ ಸಿನಿಮಾಗಳನ್ನು ನೀಡುತ್ತಿರುವ 'ಕೆಆರ್‌ಜಿ ಸ್ಟುಡಿಯೋಸ್' 'ಶೋಧ'ಕ್ಕೆ ಬಂಡವಾಳ ಹೂಡಿದೆ. ಸುನಿಲ್ ಮೈಸೂರು ಈ ವೆಬ್ ಸರಣಿಗೆ ನಿರ್ದೇಶನ ಮಾಡಿದ್ದಾರೆ. ನಿರ್ದೇಶನದ ಜೊತೆಗೆ ನಟನೆಯಲ್ಲೂ ಗಮನ ಸೆಳೆದವರು ಪವನ್ ಕುಮಾರ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಸಿರಿ ರವಿಕುಮಾರ್, ಅರುಣ್ ಸಾಗರ್ ಮತ್ತು ಅನುಷಾ ರಂಗನಾಥ್ ತಾರಾಬಳಗದಲ್ಲಿದ್ದಾರೆ. ಸಪ್ತಮಿ ಗೌಡ ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಈ ವೆಬ್ ಸರಣಿಗೆ ಸುಹಾಸ್ ನವರತ್ನ ಕಥೆ ಬರೆದಿದ್ದು ,ಆರು ಎಪಿಸೋಡ್ ಗಳುಳ್ಳ ಸಖತ್ ಸಸ್ಪೆನ್ಸ್ ಥ್ರಿಲ್ಲರ್ ಕಥೆ ಎಳೆಯೇ 'ಶೋಧ'. ಆಗಸ್ಟ್ 29ರಿಂದ ಜೀ5 ಒಟಿಟಿಯಲ್ಲಿ 'ಶೋಧ' ವೆಬ್ ಸಿರೀಸ್ ವೀಕ್ಷಣೆಗೆ ಲಭ್ಯವಾಗಲಿದೆ.

ನಮ್ಮ ಭಾಷೆ-ನಮ್ಮ ಮಣ್ಣಿನ ಕಥೆ: Zee5 ಈಗಾಗಲೇ ಅಯ್ಯನ ಮನೆ ಮೂಲಕ ಚಿಕ್ಕಮಗಳೂರು ಭಾಗದ ಕಥೆಯನ್ನು ಉಣಬಡಿಸಿತ್ತು. ಈಗ ಶೋಧ ಮೂಲಕ ಕೊಡುವ ಭಾಗದ ಕಥೆ ಹೇಳೋದಿಕ್ಕೆ ಹೊರಟಿದೆ. ಮುಂದಿನ ದಿನಗಳಲ್ಲಿ ಉತ್ತರ ಕರ್ನಾಟಕ, ಕರಾವಳಿ, ಉತ್ತರ ಕನ್ನಡ ಹೀಗೆ ರಾಜ್ಯದ ಬೇರೆ ಬೇರೆ ಭಾಗದ ಅದರಲ್ಲಿಯೂ ನೆಲಮೂಲದ ಕಥೆಗಳನ್ನು ಪ್ರೇಕ್ಷಕರ ಮುಂದೆ ಹರವಿಡಲು ಹೊರಟಿದೆ.




Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.